# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಕಿಶೋರ್ ಕುಮಾರ್ ಪುತ್ತೂರು ಇವರು ನಿಯಮ 72ರಡಿ ರಾಜ್ಯದ ಗ್ರಾಮೀಣ ಮತ್ತು ನಗರ ಭಾಗಗಳಲ್ಲಿ ಮಹಿಳೆಯರ , ಮಕ್ಕಳ ಹಾಗೂ ಸಾರ್ವಜನಿಕರ ಆರೋಗ್ಯವನ್ನು ಕಾಪಾಡುವ ನಿಟ್ಟಿನಲ್ಲಿ ಮಹತ್ತರ ಜವಬ್ದಾರಿಯನ್ನು ನಿಭಾಯಿಸುತ್ತಿರುವ ಆಶಾ ಕಾರ್ಯಕರ್ತೆಯರಿಗೆ ಸರ್ಕಾರವು ಕೇವಲ ಸಣ್ಣ ಮೊತ್ತದ ಗೌರವಧನವನ್ನು ಮಾತ್ರ ನೀಡುತ್ತಿದ್ದು, ಇತರ ಯಾವುದೇ ರೀತಿಯ ಸೌಲಭ್ಯವನ್ನು ನೀಡದಿರುವುದರಿಂದ ಅವರ ಜೀವನ ನಿರ್ವಹಣೆ ತುಂಬಾ ಕಷ್ಟಕರವಾಗಿದ್ದು, ಈಗಾಗಲೇ ಆಶಾ ಕಾರ್ಯಕರ್ತೆಯರು ಹಲವು ಬಾರಿ ಪ್ರತಿಭಟನೆ ಮಾಡಿರುತ್ತಾರೆ. ಅವರ ಗೌರವಧನವನ್ನು ಹೆಚ್ಚಿಸಿ ಅವರಿಗೆ ESI & PF ಮುಂತಾದ ಸೌಲಭ್ಯವನ್ನು ಸರ್ಕಾರದ ವತಿಯಿಂದ ನೀಡುವ ಬಗ್ಗೆ.**

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಉತ್ತರ:**

ಆಶಾ ಕಾರ್ಯಕರ್ತೆಯು ಮಾನ್ಯತೆ ಪಡೆದ ಸಾಮಾಜಿಕ ಆರೋಗ್ಯ ಕಾರ್ಯಕರ್ತೆಯಾಗಿದ್ದು, ಸ್ವಯಂ ಪ್ರೇರಿತ ನೆಲೆಗಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಮಾನ್ಯತೆ ಪಡೆದ ಸಾಮಾಜಿಕ ಆರೋಗ್ಯ ಕಾರ್ಯಕರ್ತೆಯಾಗಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಕಾರ್ಯಕ್ಷಮತೆ ಆಧಾರದ ಮೇಲೆ ಗೌರವಧನ ಮತ್ತು ಪ್ರೋತ್ಸಾಹಧನಕ್ಕೆ ಅರ್ಹರಾಗಿರುತ್ತಾರೆ.

ಕೇಂದ್ರ ಸರ್ಕಾರದ ರಾಷ್ಟ್ರೀಯ ಆರೋಗ್ಯ ಅಭಿಯಾನದ ಮಾರ್ಗಸೂಚಿಯನ್ವಯ ಗ್ರಾಮೀಣ ಪ್ರದೇಶದಲ್ಲಿ ಕನಿಷ್ಠ 1000 ಜನಸಂಖ್ಯೆ ಹಾಗೂ ನಗರ ಪ್ರದೇಶದಲ್ಲಿ 2500 ಜನಸಂಖ್ಯೆ (ಕೊಳಗೇರಿ ಮತ್ತು ದುರ್ಬಲ ವರ್ಗದ ಪ್ರದೇಶಗಳು) ಒಬ್ಬರಂತೆ ಆಶಾ ಕಾರ್ಯಕರ್ತೆಯರನ್ನು ಆಯ್ಕೆ ಮಾಡಬೇಕಾಗಿರುತ್ತದೆ.

ಆಶಾ ಕಾರ್ಯಕರ್ತೆಯರ ಕಾರ್ಯಚಟುವಟಿಕೆಗಳು ಸಂಪೂರ್ಣವಾಗಿ ಅರೆಕಾಲಿಕವಾಗಿದ್ದು ಪೂರ್ಣಕಾಲಿಕ ಸ್ವರೂಪವಾಗಿರುವುದಿಲ್ಲ. ವಿಶೇಷ ಮತ್ತು ತುರ್ತು ವೈದ್ಯಕೀಯ ಪರಿಸ್ಥಿತಿಗಳನ್ನು ಹೊರತುಪಡಿಸಿ ಸೀಮಿತ ಅವಧಿಯ ಕರ್ತವ್ಯ ನಿರ್ವಹಣೆಯ ಸ್ವರೂಪವಾಗಿರುತ್ತದೆ.

ಆಶಾ ಕಾರ್ಯಕರ್ತೆಯರು ಸಮುದಾಯ ಮತ್ತು ಸಾರ್ವಜನಿಕ ಆರೋಗ್ಯ ವ್ಯವಸ್ಥೆಯ ನಡುವೆ ಸಮನ್ವಯತೆ ಸಾಧಿಸಲು, ಮಾಹಿತಿ ವಿನಿಮಯ ಮಾಡಲು ಹಾಗೂ ಸಮುದಾಯ ಜಾಗರೂಕರಣ ಚಟುವಟಿಕೆಗಳು ಇವರ ಪ್ರಮುಖ ಜವಾಬ್ದಾರಿಯಾಗಿರುತ್ತವೆ ಆಶಾ ಕಾರ್ಯಕರ್ತೆಯರಿಗೆ ಈ ಕರ್ತವ್ಯಗಳನ್ನು ನಿರ್ವಹಿಸಲು ತರಬೇತಿಯನ್ನು ನೀಡಲಾಗಿರುತ್ತದೆ. ಈ ಚಟುವಟಿಕೆಗಳಲ್ಲಿ ಮಾತ್ರ ಪರಿಣಿತರಾಗಿರುತ್ತಾರೆ.

ಆರೋಗ್ಯ ಸೇವೆಗಳ ಪರಿಣಾಮಕಾರಿ ಪೂರೈಕೆ ಹಾಗೂ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಆಶಾ ಕಾರ್ಯಕರ್ತೆಯರ ಕಾರ್ಯ ವೈಖರಿಯನ್ನು ಗುರುತಿಸಿರುವ ರಾಜ್ಯ ಸರ್ಕಾರವು ಕಾಲಕಾಲಕ್ಕೆ, ಗೌರವಧನ ಮತ್ತು ಪ್ರೋತ್ಸಾಹಧನಗಳನ್ನು ಏರಿಕೆ ಮಾಡುತ್ತಿದೆ ಹಾಗೂ ಆರ್ಥಿಕೇತರ ಪ್ರೋತ್ಸಾಹಧನಗಳಾದ ಪ್ರಧಾನ ಮಂತ್ರಿಗಳ ಸಾಮಾಜಿಕ ಸುರಕ್ಷೆಯಡಿ ವಿಮಾ ಸೌಲಭ್ಯ ಮತ್ತು ಆಯುಷ್ಮಾನ್ ಭಾರತ ಪ್ರಧಾನ ಮಂತ್ರಿ ಜನಾರೋಗ್ಯ / ಮುಖ್ಯಮಂತ್ರಿಗಳ ಆರೋಗ್ಯ ಕರ್ನಾಟಕ ಯೋಜನೆ ಅಡಿಯಲ್ಲಿ ನಗದು ರಹಿತ ಚಿಕಿತ್ಸಾ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.

......2